ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ರಾಜ್ಯದಲ್ಲಿ ಸೋಲಾರ್‌ನಿಂದ ರೈತರು ಜಮೀನುಗಳಲ್ಲಿ ಮತ್ತು

ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

319 (410) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ಸರಿಯಾಗಿ ಪ್ರಚಾರವಾಗದೆ ನಿರೀಕ್ಷಿತ ಮಟ್ಟದಲ್ಲಿ ರೈತರಿಗೆ ಉಪಯೋಗವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸೋಲಾರ್‌ನಿಂದ ರೈತರ ಜಮೀನುಗಳಲ್ಲಿ ಮತ್ತು ಮೇಲ್ಛಾವಣಿಗಳ ಮೇಲೆ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆಯು ಯಾವಾಗಿನಿಂದ ಜಾರಿಗೆ ಬಂದಿದೆ; ಈ ಯೋಜನೆಯಲ್ಲಿ ರೈತರಿಗೆ ಸರ್ಕಾರವು ಯಾವ ಸೌಲಭ್ಯಗಳನ್ನು ಒದಗಿಸುತ್ತದೆ; (ವಿವರ ನೀಡುವುದು)

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಹಾಗೂ ಚನ್ನಗಿರಿ ತಾಲ್ಲೂಕುಗಳಲ್ಲಿ ಎಷ್ಟು ಜನ ರೈತರಿಗೆ ಈ ಯೋಜನೆಯ ಸೌಲಭ್ಯಗಳನ್ನು ಒದಗಿಸಲಾಗಿದೆ; ಈವರೆಗೆ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗಿದೆ; ಸರ್ಕಾರವು ಯಾವ ದರದಲ್ಲಿ ವಿದ್ಯುತ್ ಖರೀದಿಸುತ್ತಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಯೋಜನೆಗೆ ಕೇಂದ್ರ ಸರ್ಕಾರವು ಸಹಾಯಧನ ನೀಡಲಿದೆಯೇ; ಎಷ್ಟು ಪ್ರಮಾಣದ ಸಹಾಯಧನ ನೀಡುತ್ತದೆ